# ಕರ್ನಾಟಕ ವಿಧಾನ ಪರಿಷತ್ತು

## ಲಘು ಪ್ರಕಟಣೆ ಭಾಗ – 2

(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)

ಬುಧವಾರ, ದಿನಾಂಕ: 11ನೇ ಮಾರ್ಚ್, 2015.

**ಸಂಖ್ಯೆ: 09**

ಕರ್ನಾಟಕ ಲೋಕಾಯುಕ್ತ ಕಾಯಿದೆ, 1984ರ ಕಲಂ 7ರ ಉಪ ಕಲಂ (1)ರಲ್ಲಿ ಉಲ್ಲೇಖಿಸಿರುವಂತೆ ಸರ್ಕಾರಿ ನೌಕರನಲ್ಲದ ಪ್ರತಿಯೊಬ್ಬ ಸಾರ್ವಜನಿಕ ನೌಕರನೂ ಸಹ ತನ್ನ ಮತ್ತು ತನ್ನ ಕುಟುಂಬದ ಸದಸ್ಯರ ಆಸ್ತಿ ಮತ್ತು ದಾಯಿತ್ವಗಳ ಪಟ್ಟಿಯನ್ನು ನಿಗದಿತ ನಮೂನೆಯಲ್ಲಿ ಪ್ರತಿ ವರ್ಷ ಜೂನ್ ತಿಂಗಳ 30 ರೊಳಗಾಗಿ ಲೋಕಾಯುಕ್ತರಿಗೆ ಸಲ್ಲಿಸತಕ್ಕದ್ದು. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ/18/ಸೇಲೋಯು/2008, ದಿನಾಂಕ:25.01.2010ರಲ್ಲಿ ತಿದ್ದುಪಡಿ ಮಾಡಿರುವಂತೆ, ಕರ್ನಾಟಕ ಶಾಸಕಾಂಗದ ಸದಸ್ಯರು 2014-15ನೇ ಸಾಲಿನ ತಮ್ಮ ಮತ್ತು ತಮ್ಮ ಕುಟುಂಬದ ಸದಸ್ಯರ ಆಸ್ತಿ ಮತ್ತು ದಾಯಿತ್ವಗಳ ಪಟ್ಟಿಯನ್ನು ನಿಗದಿತ ನಮೂನೆಯಲ್ಲಿ ಪ್ರತಿ ಪುಟಕ್ಕೂ ಹಾಗೂ ಲಗತ್ತುಗಳಿಗೂ ಸಹಿ ಮಾಡಿ, ಪುಟ ಸಂಖ್ಯೆಯೊಂದಿಗೆ, ನಿಗದಿತ ಅವಧಿಯೊಳಗೆ (ಅಂದರೆ 29ನೇ ಜೂನ್ 2015ರಂದು ಅಥವಾ ಅದಕ್ಕಿಂತ ಮುಂಚಿತವಾಗಿ) ಲೋಕಾಯುಕ್ತರಿಗೆ ಸಲ್ಲಿಸಬೇಕೆಂದು ಕರ್ನಾಟಕ ಲೋಕಾಯುಕ್ತ ನಿಬಂಧಕರು ತಮ್ಮ ಪತ್ರದಲ್ಲಿ ತಿಳಿಸಿರುತ್ತಾರೆ.

ಆದುದರಿಂದ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳು 2014-15ನೇ ಸಾಲಿನ ತಮ್ಮ ಮತ್ತು ತಮ್ಮ ಕುಟುಂಬದ ಸದಸ್ಯರ ಆಸ್ತಿ ಮತ್ತು ದಾಯಿತ್ವಗಳ ಪಟ್ಟಿಯನ್ನು ಈ ಲಘು ಪ್ರಕಟಣೆಯೊಂದಿಗೆ ಲಗತ್ತಿಸಲಾಗಿರುವ ನಮೂನೆಯಲ್ಲಿ ದಿನಾಂಕ: 30ನೇ ಜೂನ್ 2015ರೊಳಗಾಗಿ (ಅಂದರೆ 29ನೇ ಜೂನ್ 2015ರಂದು ಅಥವಾ ಅದಕ್ಕಿಂತ ಮುಂಚಿತವಾಗಿ) ಲೋಕಾಯುಕ್ತ, ಅವರಿಗೆ ನೇರವಾಗಿ ಸಲ್ಲಿಸಬೇಕೆಂದು ಈ ಮೂಲಕ ಮಾನ್ಯ ಸದಸ್ಯರುಗಳ ಗಮನಕ್ಕೆ ತರಲಾಗಿದೆ.

ವಿ. ಶ್ರೀಶ್,
ಕಾರ್ಯದರ್ಶಿ.

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಿಗೆ,**